# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 491 |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ ನೂತನವಾಗಿ ನಿರ್ಮಾಣವಾಗಿರುವ ತಾಲ್ಲೂಕು ಆಸ್ಪತ್ರೆಗಳ ಸಂಖ್ಯೆ ಎಷ್ಟು; | • ವಿಜಯಪುರ ಜಿಲ್ಲೆಯಲ್ಲಿ 2017-18ನೇ ಸಾಲಿನಲ್ಲಿ 7 ಹಾಗೂ 2019-20ನೇ ಸಾಲಿನಲ್ಲಿ 1 ತಾಲ್ಲೂಕು ಘೋಷಣೆಯಾಗಿರುತ್ತದೆ.<br>• ಬಾಗಲಕೋಟೆ 2017-18ನೇ ಸಾಲಿನಲ್ಲಿ 3 ಹಾಗೂ 2019-20ನೇ ಸಾಲಿನಲ್ಲಿ 1 ತಾಲ್ಲೂಕು ಘೋಷಣೆಯಾಗಿರುತ್ತದೆ.<br>• ಬೆಳಗಾವಿ 2017-18ನೇ ಸಾಲಿನಲ್ಲಿ 3 ಹಾಗೂ 2019-20ನೇ ಸಾಲಿನಲ್ಲಿ 1 ತಾಲ್ಲೂಕು ಘೋಷಣೆಯಾಗಿರುತ್ತದೆ.<br>ಮೇಲ್ಕಂಡ ಎಲ್ಲಾ ಹೊಸ ತಾಲ್ಲೂಕುಗಳಲ್ಲಿ 100 ಹಾಸಿಗೆಯ ಸಾರ್ವಜನಿಕ ಆಸ್ಪತ್ರೆ ಸ್ಥಾಪನೆ ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿ ಸ್ಥಾಪನೆ ಪ್ರಸ್ತಾವನೆಯು ಪರಿಶೀಲಿನೆಯಲ್ಲಿದೆ. |
| ಆ) | ಹೊಸ ಆಸ್ಪತ್ರೆಗಳ ನಿರ್ಮಾಣಕ್ಕೆ ಸರ್ಕಾರಿ ಜಮೀನು ಲಭ್ಯವಿದಿದ್ದಲ್ಲಿ ರೈತರಿಂದ ನೇರ ಖರೀದಿಗೆ ಅಥವಾ ಭೂ-ಸ್ವಾಧೀನ ಪ್ರಕ್ರಿಯೆಯಡಿಯಲ್ಲಿ ಜಮೀನನ್ನು ಪಡೆಯಲು ಅವಕಾಶವಿದೆಯೇ; ಇದ್ದಲ್ಲಿ, ಅದಕ್ಕಾಗಿ ಒದಗಿಸಿರುವ ಅನುದಾನ ಎಷ್ಟು; | ಸರ್ಕಾರದ ಜಮೀನು ಲಭ್ಯವಿಲ್ಲದಿದ್ದಲ್ಲಿ, ಭೂಸ್ವಾಧೀನ ಕಾಯ್ದೆಯನ್ವಯ ಅಥವಾ ರೈತರಿಂದ ನೇರ ಖರೀದಿಗೆ ನಿಯಮಾನುಸಾರ ಕ್ರಮ ಕೈಗೊಂಡು ಜಮೀನು ಖರೀದಿಸಲು ಕ್ರಮವಹಿಸಲಾಗುವುದು |
| ಇ) | ಸದರಿ ಜಿಲ್ಲೆಗಳಲ್ಲಿ ನೂತನವಾಗಿ ತಾಲ್ಲೂಕುವಾರು ರಚನೆಯಾದರೂ ಸಹ ತಾಲ್ಲೂಕು ಅಧಿಕಾರಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು; | ತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿ ಸ್ಥಾಪನೆ ಮತ್ತು ಹುದ್ದೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |
| ಈ) | ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿನ ಅನೇಕ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ | 1. ವಿಜಯಪುರ ಜಿಲ್ಲೆಯಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ 11 ಹುದ್ದೆಗಳಲ್ಲಿ 09 ವೈದ್ಯರುಗಳು ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆ ನಿರ್ವಹಿಸುತ್ತಿದ್ದು, ಒಬ್ಬರು ಗುತ್ತಿಗೆ ಆಧಾರದ ಮೇಲೆ ಹಾಗೂ ಒಬ್ಬರು ನಿಯೋಜನೆ/ಕಾರ್ಯವ್ಯವಸ್ಥೆ |

| | | |
|---|---|---|
| | ಕೈಗೊಂಡ ಕ್ರಮಗಳೇನು? | ಮೇರೆಗೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ವಿಜಯಪುರ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆ ಇರುವುದಿಲ್ಲ.<br><br>2. ಬಾಗಲಕೋಟೆ ಜಿಲ್ಲೆಯಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ 08 ಹುದ್ದೆಗಳಲ್ಲಿ 4 ವೈದ್ಯರುಗಳು ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆ ನಿರ್ವಹಿಸುತ್ತಿದ್ದಾರೆ.<br><br>3. ಬೆಳಗಾವಿ ಜಿಲ್ಲೆಯಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ 37 ಹುದ್ದೆಗಳಲ್ಲಿ 11 ವೈದ್ಯರುಗಳು ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆ ನಿರ್ವಹಿಸುತ್ತಿದ್ದಾರೆ ಮತ್ತು 13 ವೈದ್ಯರುಗಳು ಗುತ್ತಿಗೆ ಆಧಾರದ ಮೇಲೆ ಹಾಗೂ ಒಬ್ಬರು ಆಯುಷ್ ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ.<br><br>ಮುಂದುವರೆದು, ಪತ್ರ ಸಂಖ್ಯೆ:ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ:13.12.2022ರಲ್ಲಿ ರಾಜ್ಯದ ಇತರೆ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಾಮಾನುಸಾರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ರಾಜ್ಯದಲ್ಲಿ 01 ವರ್ಷದ ಕಡ್ಡಾಯ ಗ್ರಾಮೀಣ ಸೇವೆ ಪೂರೈಸಲು ಬರುವ ಎಂಬಿಬಿಎಸ್ ವೈದ್ಯರುಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳಿಗೆ ಒಟ್ಟು 1415 ವೈದ್ಯರುಗಳನ್ನು ನೇಮಿಸಲಾಗಿದೆ. |

**ಕಡತ ಸಂಖ್ಯೆ: ಆಕುಕ 43 ಎಸ್.ಬಿ.ವಿ. 2023**

(ಡಾ|| ಕೆ. ಸುಧಾಕರ್)

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು**